ಭೋಗಾಪುರೇಶ್ವರ ದೇವಸ್ಥಾನಕ್ಕೆ ಕ್ಯಾವಟರ್ ಭೇಟಿ

ಕೊಪ್ಪಳ: ನವಲಿಯ ಐತಿಹಾಸಿಕ ಭೋಗಾಪುರೇಶ್ವರ ದೇವಸ್ಥಾನಕ್ಕೆ ಸೋಮವಾರ ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ಭೇಟಿ ನೀಡಿ ದೇವರ ದರ್ಶನ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನವಲಿ ಸೇರಿ ಸುತ್ತಲಿನ ಗ್ರಾಮಗಳಲ್ಲಿ ಭೋಗಾಪುರೇಶ್ವರ ದೇವಸ್ಥಾನ ಪ್ರಸಿದ್ಧ ಪಡೆದಿದೆ. ಈ ಭಾಗದ ಆರಾಧ್ಯ ದೈವ ಭೋಗಾಪುರೇಶ್ವರ ದೇವಸ್ಥಾನ ಅಭಿವೃದ್ಧಿಗೆ ಬಿಜೆಪಿ ಸದಾ ಸಿದ್ದವಿದೆ ಎಂದರು.

ಇದೇ ವೇಳೆ ಭೋಗಾಪುರೇಶ್ವರ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ, ರಥಕ್ಕೆ ಉತ್ತತ್ತಿ ಎಸೆದರು.

ಈ ವೇಳೆ ಬಿಜೆಪಿಯ ಮಂಡಲದ ಅಧ್ಯಕ್ಷ ಜಡಿಯಪ್ಪ ಮುಕ್ಕುಂದಿ, ನವಲಿ ಬಿಜೆಪಿಯ ಹಿರಿಯ ಮುಖಂಡರಾದ ಪಂಚೆಯಸ್ವಾಮಿ ಸಿದ್ದನೂರಮಠ್, ಭೀಮನಗೌಡ ಹಲ್ಕಾಪುರ, ಲಿಂಗಪ್ಪ ನಾಯಕ, ವೀರೇಶ್ ನಾಗವಂಶಿ,

ನವಲಿ ಶಕ್ತಿ ಕೇಂದ್ರದ ಅಧ್ಯಕ್ಷ ಶಿವಯ್ಯಸ್ವಾಮಿ, ಗ್ರಾಪಂ ಸದಸ್ಯ ದುರ್ಗಣ್ಣ ಭಜಂತ್ರಿ, ರಮೇಶ್ ಕಂಬಳಿ, ಸಂಗಮೇಶ್, ಜಡಿಯಪ್ಪ, ರಾಮಣ್ಣ ಗಾಳಿ, ಹನುಮಂತ ಕಾರಟಗಿ, ಮಂಜು ಹಲ್ಕಾಪುರ ಮತ್ತಿತರರಿದ್ದರು.

ಗದಗ : ಡಾ. ಪಂಡಿತ ಪುಟ್ಟರಾಜ ರಾಜ್ಯ ರೈತ ಸಂಘದ ವತಿಯಿಂದ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ. ಆರ್. ಅಂಬೇಡ್ಕರವರ 133ನೇ ಜಯಂತಿ ಆಚರಣೆಯನ್ನು ಗದಗ-ಬೆಟಗೇರಿ ನಗರಸಭೆ ಆವರಣದಲ್ಲಿರುವ ಡಾ. ಬಿ. ಆರ್. ಅಂಬೇಡ್ಕರವರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಆಚರಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ಸಂಸ್ಥಾಪಕ ಅಧ್ಯಕ್ಷರು, ರಾಜ್ಯ ಅಧ್ಯಕ್ಷರಾದ ಎಂ. ಪಿ. ಮುಳಗುಂದ, ಉಪಾಧ್ಯಕ್ಷರಾದ ದಾವಲಸಾಬ ನಾಗನೂರ, ಎಂ. ಪಿ. ಶಲವಡಿ, ಹಾಜಿಅಲಿ ಕೊಪ್ಪಳ ಉಪಸ್ಥಿತರಿದ್ದರು.

ದ್ವಿತೀಯ ಪಿಯು ವಿದ್ಯಾರ್ಥಿಗಳ ಸಾಧನೆ

ಯರಗಟ್ಟಿ: ಪಟ್ಟಣದ ಸೂಮಲಿಂಗಪ್ಪ ಬ. ಜಕಾತಿ ಸರಕಾರಿ ಪಿ ಯು ಕಾಲೇಜಿನ ದ್ವಿತೀಯ ಪಿಯು ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶ. ಕಲಾವಿಭಾಗ – ತಂಜೀಲಾ ಕೂಟೂರ 93.16%, ತಸ್ಲಿಮಾ ಹಸನಖಾನ 90.83%, ಸಾಕ್ಷಿ ಅಂಗಡಿ 88.33, ವಾಣಿಜ್ಯ ವಿಭಾಗ ಸುಷ್ಮೀತಾ ಪೂಜೇರ89.83%, ಸವಿತಾ ಹೂಸಳ್ಳಿ 88%, ಪ್ರದೀಪ ಕುರಿ 86.83%, ವಿಜ್ಞಾನ ವಿಭಾಗ ಅರುಣಾ ಭಜಂತ್ರಿ 90.5%, ಸಕ್ಕೂ ರಾಯನ್ನವರ 88.16%, ಕೌಶಲ್ಯ ಸಣಗೌಡ್ರ 85.83% ಅಂಕಗಳನ್ನು ಪಡೆದು ಕಾಲೇಜಿನ ಕೀರ್ತಿ ಹೆಚ್ಚಿಸಿದ್ದಾರೆ ಒಟ್ಟು ಫಲಿತಾಂಶ ಕಲಾವಿಭಾಗ 100%, ವಾಣಿಜ್ಯ ವಿಭಾಗ 96%, ವಿಜ್ಞಾನ ವಿಭಾಗ 72.72% ಪ್ರತಿಶತದಷ್ಟು ವಿದ್ಯಾರ್ಥಿಗಳು ಪಾಸಾಗಿದ್ದಾರೆ ಇದಕ್ಕೆ ಕಾಲೇಜಿನ ಪ್ರಾಚಾರ್ಯರು ಹಾಗೂ ಉಪನ್ಯಾಸಕ ವರ್ಗ ಮತ್ತು ಆಡಳಿತ ಮಂಡಳಿ ಅಭಿನಂದನೆ ಸಲ್ಲಿಸಿದ್ದಾರೆ

ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ: ಜಿಲ್ಲಾಡಳಿತದಿಂದ ಪುಷ್ಪನಮನ ಸಲ್ಲಿಕೆ



ಕೊಪ್ಪಳ ಏಪ್ರಿಲ್ : ಜಿಲ್ಲಾಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಏಪ್ರಿಲ್ 14ರಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು.

ಲೋಕಸಭಾ ಚುನಾವಣೆಯ ಮಾದರಿ ನೀತಿ ಸಂಹಿತೆ ಜಾರಿ ಹಿನ್ನೆಲೆಯಲ್ಲಿ ಜಯಂತಿಯನ್ನು ಸರಳವಾಗಿ ಆಚರಿಸಲಾಯಿತು. ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ಅವರು ಡಾ.ಬಿ.ಆರ್.ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ, ಉಪವಿಭಾಗಾಧಿಕಾರಿಗಳಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ರಾಜು ತಳವಾರ, ಕೊಪ್ಪಳ ತಹಶೀಲ್ದಾರರಾದ ವಿಠಲ್ ಚೌಗಲ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

ಪುತ್ಥಳಿಗೆ ಮಾಲಾರ್ಪಣೆ: ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಪ್ರಯುಕ್ತ ಹೊಸಪೇಟೆ ರಸ್ತೆಯಲ್ಲಿರುವ ಕಿಶೋರಿ ಪೆಟ್ರೋಲ್ ಬಂಕ್ ಹಿಂಭಾಗದ ನಗರಸಭೆಯ ಶ್ರೀ ನಜಶರಣ ಅಂಬಿಗರ ಚೌಡಯ್ಯ ಉದ್ಯಾನವನದಲ್ಲಿರುವ ಡಾ. ಬಿ. ಆರ್. ಅಂಬೇಡ್ಕರ್ ಮಹನೀಯರ ಪುತ್ಥಳಿಗೆ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ ಅವರು ಪುಷ್ಪಾರ್ಚನೆ ಹಾಗೂ ಮಾಲಾರ್ಪಣೆ ಮಾಡಿ ಮಹನೀಯರಿಗೆ ಗೌರವ ನಮನ ಸಲ್ಲಿಸಿದರು.

ಈ ವೇಳೆ ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ, ಉಪವಿಭಾಗಾಧಿಕಾರಿಗಳಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ರಾಜು ತಳವಾರ, ಕೊಪ್ಪಳ ತಹಶೀಲ್ದಾರರಾದ ವಿಠಲ್ ಚೌಗಲ್, ತಾಲ್ಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ದುಂಡಪ್ಪ ತುರಾದಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಕೊಪ್ಪಳ ವಿಶ್ವವಿದ್ಯಾಲಯ: ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆ

ಕೊಪ್ಪಳ ಏಪ್ರಿಲ್ : ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ಎಪ್ರಿಲ್ 14 ರಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಅವರ 133 ನೇ ಜಯಂತಿಯನ್ನು ಆಚರಿಸಲಾಯಿತು.

ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಕೆ ರವಿ ಅವರು ಡಾ.ಬಿ.ಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ.ಕೆ.ವಿ ಪ್ರಸಾದ್, ನಿರ್ದೇಶಕರಾದ ಪ್ರೊ. ಚನ್ನಬಸವಪ್ಪ ಚಲವಾದಿ, ಯಲಬುರ್ಗಾ ಸ್ನಾತಕೋತ್ತರ ಕೇಂದ್ರದ ರಸಾಯನಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಸೂರ್ಯಕಾಂತ ಸಾದು, ವಾಣಿಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಬಸವರಾಜ ಈಳಿಗನೂರ ಸೇರಿದಂತೆ ಇತರೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು

ಡಾ.ಬಸವರಾಜ ಪರ ಸಿವಿಸಿ ಮತಯಾಚನೆ

ಕೊಪ್ಪಳ: ಲೋಕಸಭಾ ಚುನಾವಣೆ ಹಿನ್ನೆಲೆ ಹೊಸಲಿಂಗಾಪುರ, ಮುನಿರಾಬಾದ್, ಶಹಾಪುರ ಸೇರಿ ಹಲವು ಗ್ರಾಮಗಳಲ್ಲಿ ಎನ್‌ಡಿಎ ಅಭ್ಯರ್ಥಿ ಡಾ. ಬಸವರಾಜ ಕ್ಯಾವಟರ್ ಅವರ ಪರವಾಗಿ ಜೆಡಿಎಸ್ ರಾಜ್ಯ ಕೋರ್ ಕಮಿಟಿ ಸಮಿತಿ ಸದಸ್ಯ ಸಿ.ವಿ.ಚಂದ್ರಶೇಖರ್ ಮತಯಾಚಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶದ ಅಭಿವೃದ್ಧಿಗಾಗಿ ಜೆಡಿಎಸ್ ಪಕ್ಷವು ಎನ್‌ಡಿಎ ಮೈತ್ರಿಕೂಟ ಸೇರಿದೆ. ಕೊಪ್ಪಳ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ಅವರು ಯುವಕರಾಗಿದ್ದು, ಸಾಮಾಜಿಕ ಸೇವೆಯಲ್ಲಿ ಗುರುತಿಸಿಕೊಂಡಿದ್ದಾರೆ. ಕ್ಷೇತ್ರದ ಅಭಿವೃದ್ಧಿ ಚಿಂತನೆ ಹೊಂದಿದವರಾಗಿದ್ದು, ಕ್ಷೇತ್ರದ ಅಭಿವೃದ್ಧಿಗಾಗಿ ಡಾ.ಬಸವರಾಜ ಕ್ಯಾವಟರ್ ಅವರಿಗೆ ಮತ ನೀಡಿ ಎಂದರು.ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಅಭಿವೃದ್ಧಿ ಆಡಳಿತ ಮುಂದುವರೆಯಬೇಕು. ಈ ಹಿನ್ನೆಲೆಯಲ್ಲಿ ಮತ್ತೊಮ್ಮೆ ಎನ್‌ಡಿಎ ಅಭ್ಯರ್ಥಿ ಗಳಿಗೆ ಮತ ನೀಡುವ ಮೂಲಕ ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಪ್ರಧಾನ ಮಾಡಬೇಕು ಎಂದು ತಿಳಿಸಿದರು.ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ- ಜೆಡಿಎಸ್ ಕಾರ್ಯಕರ್ತರು ಪ್ರತಿ ಮನೆ ಮನೆಗೆ ತೆರಳಿ ಪ್ರಚಾರ ಮಾಡಿ. ಜೆಡಿಎಸ್ ಹಾಗೂ ಬಿಜೆಪಿ ಸರ್ಕಾರದ ಅವಧಿಯ ಸಾಧನೆಯನ್ನು ತಿಳಿಸಿ ಎನ್‌ಡಿಎ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ಗೆ ಮತ ಹಾಕಿಸಬೇಕು ಎಂದರು.

ಈ ಸಂದರ್ಭದಲ್ಲಿ ಬಿಜೆಪಿ-ಜೆಡಿಎಸ್ ಉಭಯ ಪಕ್ಷಗಳ ಮುಖಂಡರಾದ ಮೂರ್ತೆಪ್ಪ ಹಿಟ್ನಾಳ, ಮುದ್ಲಾಪುರ್ ಶಿವಪ್ಪ ನಾಯಕ್, ಪ್ರದೀಪ ಹಿಟ್ನಾಳ, ವಿರೂಪಾಕ್ಷಪ್ಪ ಬಾರಕೇರ, ವಸಂತ್ ನಾಯಕ್, ಜಂಬಣ್ಣ ಬಾರಕೇರ, ಯಮನೂರಪ್ಪ ಕಟಗಿ, ಶ್ರೀನಿವಾಸ್ ಪೂಜಾರ್ ಸೇರಿದಂತೆ ಗ್ರಾಮದ ಮುಖಂಡರು ಭಾಗವಹಿಸಿದ್ದರು.

ದೆಹಲಿ ಸಿಎಂ ಕೇಜ್ರಿಗೆ ಏ.29ರವರೆಗೆ ತಿಹಾರ್ ಜೈಲೇ ಗತಿ

ಹೊಸದಿಲ್ಲಿ, ಅ 15 (ಪಿಟಿಐ) : ರಾಷ್ಟ್ರ ರಾಜಧಾನಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ಸುಪ್ರೀಂ ಕೋರ್ಟ್‌ನಲ್ಲೂ ಜಾಮೀನು ದೊರೆತಿಲ್ಲದ ಕಾರಣ ಇನ್ನು ಸ್ವಲ್ಪ ದಿನಗಳ ಕಾಲ ತಿಹಾರ್ ಜೈಲಿನಲ್ಲೇ ಕಾಲ ಕಳೆಯುವಂತಹ ಸನ್ನಿವೇಶ ಎದುರಾಗಿದೆ.

ಆಪಾದಿತ ಅಬಕಾರಿ ನೀತಿ ಹಗರಣದಿಂದ ಉಂಟಾದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ತನ್ನ ಬಂಧನವನ್ನು ಪ್ರಶ್ನಿಸಿ ದಿಲ್ಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಮಾಡಿರುವ ಮನವಿಯ ಅರ್ಜಿ ವಿಚಾರಣೆಯನ್ನು ಏ.29ರ ನಂತರ ನಡೆಸಲಾಗುವುದು ಎಂದು ಸುಪ್ರೀಂ ಕೋರ್ಟ್ ಅಭಿಪ್ರಾಯಪಟ್ಟಿರುವುದರಿಂದ ಕೇಜ್ರಿ ಅವರು ಏ.29ರವರೆಗೆ ಜೈಲಿನಲ್ಲೇ ಇರಬೇಕಾಗುತ್ತದೆ.

ಜಾಮೀನು ಅರ್ಜಿಯ ವಿಚಾರಣೆ ಕೈಗೆತ್ತಿಕೊಂಡ ಸುಪ್ರೀಂ ಕೋರ್ಟ್ ನ್ಯಾಯಪೀಠ ಈ ಕುರಿತಂತೆ ಜಾರಿ ನಿರ್ದೇಶನಾಲಯದಿಂದ ಪ್ರತಿಕ್ರಿಯೆ ಕೇಳಿದೆ. ಕೇಜ್ರಿವಾಲ್ ಅವರ ಬಂಧನವನ್ನು ಎತ್ತಿಹಿಡಿದ ದೆಹಲಿ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಕೇಜ್ರಿವಾಲ್ ಸಲ್ಲಿಸಿರುವ ಮನವಿಯ ಮೇರೆಗೆ ನ್ಯಾಯಮೂರ್ತಿಗಳಾದ ಸಂಜೀವ್ ಖನ್ನಾ ಮತ್ತು ದೀಪಂಕರ್ ದತ್ತಾ ಅವರ ಪೀಠವು ಇಡಿಗೆ ನೋಟಿಸ್ ಜಾರಿ ಮಾಡಿ, ಏಪ್ರಿಲ್ 24 ರೊಳಗೆ ಅರ್ಜಿಗೆ ಉತ್ತರಿಸುವಂತೆ ಸೂಚಿಸಿದೆ ಮತ್ತು ಏಪ್ರಿಲ್ 29 ರಿಂದ ಪ್ರಾರಂಭವಾಗುವ ವಾರದಲ್ಲಿ ಈ ವಿಷಯದ ವಿಚಾರಣೆ ನಡೆಯಲಿದೆ ಎಂದು ಹೇಳಿದರು.

ಮನಿ ಲಾಂಡರಿಂಗ್ ಪ್ರಕರಣದಲ್ಲಿ ಅವರ ಬಂಧನವನ್ನು ಹೈಕೋರ್ಟ್ ಏಪ್ರಿಲ್ 9 ರಂದು ಎತ್ತಿಹಿಡಿದಿತ್ತು. ಅವರು ಪುನರಾವರ್ತಿತ ಸಮನ್ಸ್‌ಗಳನ್ನು ಬಿಟ್ಟು ತನಿಖೆಗೆ ಸೇರಲು ನಿರಾಕರಿಸಿದ ನಂತರ ಇಡಿಗೆ ಸಣ್ಣ ಆಯ್ಕೆ ಉಳಿದಿದೆ ಎಂದು ಹೇಳಿದರು. ಇಡಿ ತನ್ನನ್ನು ಬಂಧಿಸಿರುವುದನ್ನು ಪ್ರಶ್ನಿಸಿ ಆಮ್ ಆದ್ಮಿ ಪಕ್ಷದ (ಎಎಪಿ) ನಾಯಕನ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದ್ದ ಕಾರಣ ಅವರು ಏಜೆನ್ಸಿ ಕಸ್ಟಡಿಯಲ್ಲಿದ್ದಾರೆ.

ಫೆಡರಲ್ ಆಂಟಿ ಮನಿ ಲಾಂಡರಿಂಗ್ ಏಜೆನ್ಸಿಯ ಬಲವಂತದ ಕ್ರಮದಿಂದ ರಕ್ಷಣೆ ನೀಡಲು ಹೈಕೋರ್ಟ್ ನಿರಾಕರಿಸಿದ ಗಂಟೆಗಳ ನಂತರ, ಮಾರ್ಚ್ 21 ರಂದು ಕೇಜ್ರಿವಾಲ್ ಅವರನ್ನು ಇಡಿ ಬಂಧಿಸಿತು. ಅವರು ಪ್ರಸ್ತುತ ತಿಹಾರ್ ಜೈಲಿನಲ್ಲಿದ್ದಾರೆ.

ಮತದಾನ ಜಾಗೃತಿಗಾಗಿ ಸೈಕ್ಲಿಂಗ್ ಜಾಥಾ ಮತ್ತು ಮಾನವ ಸರಪಳಿ ಆಯೋಜನೆ

ಗದಗ ಏಪ್ರಿಲ್ 15: ಲೋಕಸಭಾ ಚುನಾವಣೆಗಳು 2024 ರ ಸಂಬಂಧ ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಮೇ 7 ರಂದು ಮತದಾನ ಜರುಗಲಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುವಂತೆ ಪ್ರೇರೇಪಿಸುವ ಸಲುವಾಗಿ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರ ನಿರ್ದೇಶನದಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಸ್ವೀಪ್ ಕಾರ್ಯಕ್ರಮವಾಗಿ ಏಪ್ರಿಲ್ 16 ರಂದು ಬೆಳಿಗ್ಗೆ 7 ಗಂಟೆಗೆ ಗದಗ ಶಹರದಲ್ಲಿ ಸೈಕ್ಲಿಂಗ್ ಜಾಥಾವನ್ನು ಹಾಗೂ ಏಪ್ರಿಲ್ 19 ರಂದು ಬೆಳಿಗ್ಗೆ 7 ಗಂಟೆಗೆ ಗದಗ ಶಹರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿ ಮಾನವ ಸರಪಳಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ಸೈಕ್ಲಿಂಗ್ ಜಾಥಾ ಹಾಗೂ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು, ವಿವಿಧ ಸಂಘಸಂಸ್ಥೆಗಳು ಭಾಗವಹಿಸಿ ಯಶಸ್ವಿಗೊಳಿಸಲು ಪ್ರಕಟಣೆ ತಿಳಿಸಿದೆ.

ಸೈಕ್ಲಿಂಗ್ ಜಾಥಾ ಹೊರಡುವ ಮಾರ್ಗ: ಜಾಥಾವು ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಿಂದ ಪ್ರಾರಂಭಗೊಂಡು ಪಂಚಾಕ್ಷರಿ ನಗರದ ಶುದ್ಧ ಕುಡಿಯುವ ನೀರಿನ ಘಟಕ ಚೇತನ ಕ್ಯಾಂಟೀನ್ ಹಾತಲಗೇರಿ ನಾಕಾ ಬಳ್ಳಾರಿ ಗೇಟ್ ಕುರಹಟ್ಟಿ ಪೇಟೆ ? ಟೆಂಗಿನಕಾಯಿ ಬಜಾರ- ಜರ್ಮನ್ ಆಸ್ಪತ್ರೆ, ಸಹಸ್ರಾರ್ಜುನ ಸರ್ಕಲ್ , ಮಹಾರಾಣ ಪ್ರತಾಪ ಸಿಂಹ ಸರ್ಕಲ್ -ಹಳೇ ಕೋರ್ಟ ಸರ್ಕಲ್, ಗಾಂದಿ ಸರ್ಕಲ್, ರೋಟರಿ ಸರ್ಕಲ್, ಭೂಮರಡ್ಡಿ ಸರ್ಕಲ್ , ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ತಲುಪಲಿದೆ

ಸುನಂದಾ ಲಿಂಗನಗೌಡ ಪಾಟೀಲ ನಿಧನ

ಬೆಳಗಾವಿ: ಮಾಜಿ ವಿಧಾನ ಪರಿಷತ್ ಸದಸ್ಯೆ ಸುನಂದಾ ಲಿಂಗನಗೌಡ ಪಾಟೀಲ (71)ಅವರು ಅನಾರೋಗ್ಯದಿಂದ ಬೆಳಗಾವಿಯ ಖಾಸಗಿ ಆಸ್ಪತ್ರೆಯಲ್ಲಿ ಭಾನುವಾರ 14/04/2024 ಬೆಳಿಗ್ಗೆ ನಿಧನರಾಗಿದ್ದಾರೆ. ಮೂಲತಃ ಹಿರೇ ಬಾಗೇವಾಡಿ ಗ್ರಾಮದವರಾದ ಇವರು ಒಂದು ಬಾರಿ ಜಿಲ್ಲಾ ಪಂಚಾಯತ ಉಪಾಧ್ಯಕ್ಷರಾಗಿ ಹಾಗೂ ಒಂದು ಬಾರಿ ವಿಧಾನ ಪರಿಷತ್ ಸದಸ್ಯರಾಗಿ ಸೇವೆ ಸಲ್ಲಿಸಿದ್ದರು.

ಮೃತರ ಅಂತ್ಯಸಂಸ್ಕಾರವನ್ನು ಇಂದು ಸಂಜೆ ಹಿರೇ ಬಾಗೇವಾಡಿ ಗ್ರಾಮದ ತೋಟದ ಮನೆಯಲ್ಲಿ ನೆರವೇರಿಸಲಾಗುವುದು.ಮೃತರಿಗೆ ಪುತ್ರಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗ ಇದೆ.

ಯಮಕನಮರಡಿ ಗ್ರಾಮ ಪಂಚಾಯತಿ ಯಲ್ಲಿ ಡಾ ಬಾಬಾ ಸಾಹೇಬ್ ಅಂಬೇಡ್ಕರ್ ಅವರ 133ನೇ ಜಯಂತಿ ಆಚರಣೆ ಮಾಡಲಾಯಿತು ಪಿಡಿಓ ಎಸ್ ಎಸ್ ಡಂಗ ಅವರು ಡಾ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು ಈ ವೇಳೆಯಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿ ಇದ್ದರು

ಹುಕ್ಕೇರಿ ತಾಲೂಕಿನ ಹಿಡಕಲ್ ಡ್ಯಾಮ ಗ್ರಾಮದ ಶ್ರೀ ಬಸವೇಶ್ವರ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಭಾರತ ರತ್ನ ಡಾ ಬಿ.ಆರ್.ಅಂಬೇಡ್ಕರ'ವರ 133ನೇ ಜಯಂತಿಯನ್ನು ಆಚರಿಸಲಾಯಿತು

ಗದಗ ; ಶೋಷಿತರಿಗೆ, ದೀನ ದಲಿತರಿಗೆ ಗುಣಾತ್ಮಕ ಶಿಕ್ಷಣ ನೀಡಿ ಅವರನ್ನ ಸಮುದಾಯದ ಮುಖ್ಯವಾಹಿನಿಗೆ ತರುವ ಪ್ರಮುಖ ಉದ್ದೇಶದಿಂದಾಗಿಯೇ 1946 ರಲ್ಲಿ ಪೀಪಲ್ಸ್ ಎಜುಕೇಶನ್ ಇನ್ಸಟಿಟ್ಯೂಶನ್ ಸ್ಥಾಪಿಸಿರುವ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ ಅವರ ಶ್ರೇಷ್ಠ ಸಾಮಾಜಿಕ ಸಂಘಟನಾತ್ಮಕ ಸೇವಾ ಮನೋಭಾವನೆಯ ವ್ಯಕ್ತಿತ್ವ ಮಾದರಿಯಾಗಿದೆ ಎಂದು ಮಾಜಿ ಸಚ